Form No.4 (Civil) Deposition Sheets (R.P.No.57)

# ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ

## ಎಸ್.ಸಿ. ಸಂಖ್ಯೆ: 63/2023

ಪ್ರಾ.ಸಾ. 3 ಚಾ.ಸಾ 1

| | | |
|---|---|---|
| ಹೆಸರು | : | ಗೋವಿಂದ |
| ತಂದೆಯ ಹೆಸರು | : | ದೊಡ್ಡ ಸಕ್ರ್ಯಾ |
| ವಯಸ್ಸು | : | 70 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸ | : | ಅರಕೇರಾ (ಕೆ) |

ಪ್ರಮಾಣ ವಚನ ಭೋಧಿಸಿದ ದಿನಾಂಕ: 17-04-2026
ಮುಖ್ಯ ವಿಚಾರಣೆ ಸರಕಾರಿ ಅಭಿಯೋಜಕರಿಂದ

ನನಗೆ ಎರಡು ಎಕರೆ ಜಮೀನು ಇರುತ್ತದೆ. ಅದರ ಸರ್ವೆ ನಂಬರ ಗೊತ್ತಿರುವುದಿಲ್ಲ. ಸುಮಾರು 2-3 ವರ್ಷಗಳ ಹಿಂದೆ ನಾನು ನಮ್ಮ ಹೊಲದಲ್ಲಿ ಇದ್ದಾಗ ಪೊಲೀಸರು ಒಂದು ದಾಖಲೆಗೆ ನನ್ನ ಹೆಬ್ಬಟ್ಟಿನ ಸಹಿ ಪಡೆದುಕೊಂಡಿರುತ್ತಾರೆ. ಸದರಿ ದಾಖಲೆ ದೂರು ಆಗಿದ್ದು ಅದನ್ನು **ನಿ.ಪಿ.8** ಎಂದು ಗುರುತಿಸಲಾಯಿತು. ಪೊಲೀಸರು ನನ್ನನ್ನು ಪುನಃ ಕರೆಯಿಸಿ ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ಸಾಕ್ಷಿದಾರರಿಗೆ ಗುನ್ನೆ ಸ್ಥಳದ ಪಂಚನಾಮೆ ತೋರಿಸಲಾಗಿದ್ದು ನೋಡಿ ಗುರುತಿಸಿದ್ದು ಅದನ್ನು **ನಿ.ಪಿ.9** ಎಂದು ಗುರುತಿಸಲಾಯಿತು. ಆ ಕಾಲಕ್ಕೆ ತೆಗೆದ ಒಟ್ಟು ಹತ್ತು ಭಾವಚಿತ್ರಗಳನ್ನು ತೆಗೆದಿರುತ್ತಾರೆ ಅವುಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು **ನಿಪಿ.10 ರಿಂದ 19** ಎಂದು ಗುರುತಿಸಲಾಯಿತು. ನಿ.ಪಿ.10 ರಿಂದ 19 ಅನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ಗೊತ್ತಿರುವುದಿಲ್ಲ.

**(ಈ ಸಂದರ್ಭದಲ್ಲಿ ಮಾನ್ಯ ಪಿಪಿರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿರುತ್ತಾರೆ, ಅನುಮತಿ ನೀಡಲಾಗಿದೆ.)**

**ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ**

2. ಸರ್ವೆ ನಂಬರ 75/7 ರಲ್ಲಿ 13 ಗುಂಟೆ ಜಮೀನು ಇರುತ್ತದೆ ಎಂದರೆ ಸರಿ. ದಿಃ 03.04.2023 ರಂದು ಮಧ್ಯಾಹ್ನ 2.00 ಗಂಟೆಗೆ ನಾನು ನನ್ನ ಹೊಲಕ್ಕೆ ಹೋದಾಗ ಚಾಸಾ-13 ರವರು ನನ್ನ ನೋಡಿ ಕರೆದರು ಎಂದರೆ ಸರಿಯಲ್ಲ. ನಂತರ ಚಾಸಾ-13 ರವರು ಆ ಜಮೀನಿನಲ್ಲಿ 20-25 ವರ್ಷದ ಹೆಣ್ಣು ಮಗಳ ಸುಟ್ಟು ಕರಕಲಾದ ದೇಹವಿದ್ದು ಹಿಂದಿನ ದಿನ ರಾತ್ರಿ ಯಾರೋ ದುಷ್ಕರ್ಮಿಗಳು ಯಾವುದೇ ದುರುದ್ದೇಶದಿಂದ ಕೊಲೆ ಮಾಡಿ ಸಾಕ್ಷ್ಯಧಾರಗಳನ್ನು ನಾಶಪಡಿಸುವ ಉದ್ದೇಶದಿಂದ ಅವಳ ಶರೀರವನ್ನು ಸುಟ್ಟು ಹಾಕಿರುತ್ತಾರೆ ಎಂದು ಕಂಡು ಬರುತ್ತದೆ ಈ ವಿಷಯ ಕುರಿತು ನಾನು ನಿ.ಪಿ.8 ರಂತೆ ದೂರು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

3. ದಿಃ 04.04.2023 ಬೆಳಿಗ್ಗೆ 9.00-10.00 ಗಂಟೆಯವರೆಗೆ ನನ್ನನ್ನು ಹಾಗೂ ಚಾಸಾ-4 ಮತ್ತು 5 ರವರನ್ನು ಗುನ್ನೆ ಸ್ಥಳಕ್ಕೆಕರೆಯಿಸಿ ನಿ.ಪಿ.9 ರಂತೆ ಸ್ಥಳ ಪಂಚನಾಮೆ ಮಾಡಿ ಸ್ಥಳದಿಂದ ಒಟ್ಟು 7 ಮುದ್ದೆ ಮಾಲುಗಳನ್ನು ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸ್ಥಳದಲ್ಲಿಯೇ ನಿ.ಪಿ.10 ರಿಂದ 19 ರಂತೆ ಭಾವಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

4. ದಿಃ 21.04.2023 ರಂದು ಘಟನೆ ಕುರಿತು ಪುರವಣಿ ಹೇಳಿಕೆ ನಿಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಪುರವಣಿ ಹೇಳಿಕೆಯನ್ನು **ನಿ.ಪಿ.20** ಎಂದು ಗುರುತಿಸಲಾಯಿತು.

5. ನನಗೆ ಎಲ್ಲಾ ವಿಷಯಗೊತ್ತಿದ್ದರು ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿತರ ಪರವಾಗಿ ಶ್ರೀ. ಎ.ಎಸ್.ಪಿ.ವಕೀಲರಿಂದ

- ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

ಮರುವಿಚಾರಣೆಃ-ಇಲ್ಲ

(ನನ್ನ ಉಕ್ತ ಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಓ.ಹೇ.ಕೆ.ಸ. ಇದೆ.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು, ಯಾದಗಿರಿ.

Form No.4 (Civil) Deposition Sheets (R.P.No.57)

## ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ

## ಎಸ್.ಸಿ. ಸಂಖ್ಯೆಃ 63/2023

ಪ್ರಾ.ಸಾ. 4 ಚಾ.ಸಾ 7

| | | |
|---|---|---|
| ಹೆಸರು | : | ನರಸಿಂಹ |
| ತಂದೆಯ ಹೆಸರು | : | ನರಸಪ್ಪ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸ | : | ಗುರುಮಠಕಲ್ |

ಪ್ರಮಾಣ ವಚನ ಭೋಧಿಸಿದ ದಿನಾಂಕಃ 17-04-2026
ಮುಖ್ಯ ವಿಚಾರಣೆ ಸರಕಾರಿ ಅಭಿಯೋಜಕರಿಂದ

ನನಗೆ ಚಾಸಾ-6 ಮತ್ತು 12 ರವರ ಪರಿಚಯ ಇರುವುದಿಲ್ಲ. ನನ್ನ ಹಾಗೂ ಚಾಸಾ-6 ಮತ್ತು 12 ರವರನ್ನು ಠಾಣೆಗೆ ಕರೆಯಿಸಿ ನಮ್ಮ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ. ಇದು ಅಲ್ಲದೆ ಬೇರೆ ಯಾವುದೇ ಸ್ಥಳಕ್ಕೆ ಕರೆದುಕೊಂಡು ಹೋಗಿ ಪಂಚನಾಮೆ ಮಾಡಿರುವುದಿಲ್ಲ. ಸಾಕ್ಷಿದಾರರಿಗೆ ಈಗ ಮೃತ ಅನಾಮದೇಹ ಹೆಣ್ಣು ಮಗಳ ಅಂತ್ಯಸಂಸ್ಕಾರದ ಸ್ಥಳದ ಪಂಚನಾಮೆಯನ್ನು ತೋರಿಸಿದ್ದು ಅದನ್ನು ನೋಡಿ ಗುರುತಿಸಿದ್ದು ಅದನ್ನು **ನಿ.ಪಿ.21** ಎಂದು ಸಾಕ್ಷಿದಾರರ ಸಹಿಯನ್ನು **ನಿ.ಪಿ.21(ಎ)** ಎಂದು ಗುರುತಿಸಲಾಯಿತು. ಆ ಕಾಲಕ್ಕೆ ಎರಡು ಭಾವಚಿತ್ರಗಳನ್ನುತೆಗೆದಿರುತ್ತಾರೆ ಸಾಕ್ಷಿದಾರರು ನೋಡಿ ಗುರುತಸಿದ್ದು ಅವುಗಳನ್ನು **ನಿ.ಪಿ.22 ಮತ್ತು 23** ಎಂದು ಗುರುತಿಸಲಾಯಿತು. ನಿ.ಪಿ.22 ಮತ್ತು 23 ಅನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

2. ಇನ್ನೊಂದು ಪಂಚನಾಮೆ CEN ಪೊಲೀಸ ಠಾಣಾ ಯಾದಗಿರಿ Mobile data extract ಪರೀಶಿಲನೆ ಮಾಡಿದ ಪಂಚನಾಮೆಯನ್ನು ತೋರಿಸಿದ್ದು ನೋಡಿ ಗುರುತಿಸಿರುತ್ತಾರೆ ಅದನ್ನು **ನಿ.ಪಿ.24** ಎಂದು ಸಾಕ್ಷಿದಾರರ ಸಹಿಯನ್ನು **ನಿ,ಪಿ.24(ಎ)** ಎಂದು ಗುರುತಿಸಲಾಯಿತು. ಪಂಚನಾಮೆಗೆ ಯಾವ ಕಾರಣಕ್ಕಾಗಿ ನನ್ನ ಸಹಿ ಪಡೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

(**ಈ ಸಂದರ್ಭದಲ್ಲಿ ಮಾನ್ಯ ಪಿಪಿರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿರುತ್ತಾರೆ**, **ಅನುಮತಿ ನೀಡಲಾಗಿದೆ**.)

**<u>ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ</u>**

3. ದಿಃ 04.04.2023 ರಂದು ನನ್ನನ್ನು ಹಾಗೂ ಚಾಸಾ-6 ರವರನ್ನು ಮಧ್ಯಾಹ್ನ 2.35 ಗಂಟೆಗೆ ಗುರುಮಠಕಲ ಪೊಲೀಸರು ಠಾಣೆಗೆ ಕರೆಸಿದ್ದರು ಎಂದರೆ ಸರಿಯಲ್ಲ. ನಂತರ ಮಧ್ಯಾಹ್ನ 3.00-4.30 ಗಂಟೆಯವರೆಗೆ ಗುರುಮಠಕಲ ಪಟ್ಟಣದ ಸ್ಮಶಾನದಲ್ಲಿ ಕರೆಯಿಸಿ ಅನಾಮ ದೇಹ ಮೃತ ದೇಹವನ್ನು ಮಣ್ಣು ಮುಚ್ಚಿದ ಸ್ಥಳದ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ.21 ಅನ್ನು ಸ್ಥಳದಲ್ಲಿ ಬೆರದು ಓದಿ ಹೇಳಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ.22 ಮತ್ತು 23 ರಂತೆ ಭಾವಚಿತ್ರಗಳನ್ನು ಆ ಕಾಲಕ್ಕೆ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

4. ದಿಃ 17.05.2023 ರಂದು ಮಧ್ಯಾಹ್ನ 2.00 ಗಂಟೆಗೆ ನನ್ನನ್ನು ಹಾಗೂ ಚಾಸಾ-12 ರವನ್ನು ಯಾದಗಿರಿಯ CEN ಪೊಲೀಸ ಠಾಣೆಗೆ ಕರೆಯಿಸಿ ಆರೋಪಿತನು ಎರಡು ಮೊಬೈಲ ಫೋನಗಳನ್ನು ಜಪ್ತಿಪಡಿಸಿಕೊಂಡು Mobile date extract ಮಾಡುವ ಕುರಿತು ನಿ.ಪಿ.24 ರಂತೆ ಪಂಚನಾಮೆ

ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ.24 ಅನ್ನು ಸ್ಥಳದಲ್ಲಿ ಬೆರದು ಓದಿ ಹೇಳಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

5. ಸದರಿ ವಿಷಯಗೊತ್ತಿದ್ದರು ಸಹ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರವಾಗಿ ಶ್ರೀ. ಎ.ಎಸ್.ಪಿ.ವಕೀಲರಿಂದ</u>

- ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

<u>ಮರುವಿಚಾರಣೆಃ-ಇಲ್ಲ</u>

(ನನ್ನ ಉಕ್ತ ಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಓ.ಹೇ.ಕೆ.ಸ. ಇದೆ.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು, ಯಾದಗಿರಿ.